**<u>ದಿನಾಂಕಃ 28.11.2024 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.</u>**

**<u>ಮುಂದುವರೆದ ಪಾಟೀ ಸವಾಲು ಃ ಪ್ರತಿವಾದಿ ಪರ ಶ್ರೀ ಹೆಚ್.ಎಸ್.ಹೆಚ್ ವಕೀಲರಿಂದಃ</u>**

1) ಈ ದಾವೆ ಹೂಡುವ ಪೂರ್ವದಲ್ಲಿ ನನ್ನ ಮನೆಯ ಸುತ್ತ ಮುತ್ತಲೂ ಜಾಗ ಒತ್ತುವರಿಯಾಗಿದೆ ಎಂದು ಹೇಳಿ ತಿಟ್ಟಮಾರನಹಳ್ಳಿ ಗ್ರಾಮ ಪಂಚಾಯಿತಿಗೆ 2ನೇ ಪ್ರತಿವಾದಿ ದೂರು ನೀಡಿದ್ದನು ಎಂದು ನನಗೆ ಗೊತ್ತಿಲ್ಲ. ಸದರಿ ದೂರಿನ ಆಧಾರದ ಮೇಲೆ ತಿಟ್ಟಮಾರನಹಳ್ಳಿ ಗ್ರಾಮ ಪಂಚಾಯಿತಿಯ ಪಿಡಿಓ ರವರು ಅಳತೆಗಾಗಿ ಅರ್ಜಿ ಸಲ್ಲಿಸಿದ್ದರು ಎಂದರೆ ಸಾಕ್ಷಿಯು ಅವರು ಅಳತೆಗೆ ಬಂದಿದ್ದಾಗಿ ನುಡಿಯುತ್ತಾರೆ. ಆ ರೀತಿ ಅಳತೆ ಮಾಡಿದ ನಂತರ ಒಂದುವರೆ ಗುಂಟೆ ಜಾಗ ಒತ್ತುವರಿಯಾಗಿದೆ ಎಂದು ವರದಿ ನೀಡಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ. ತದನಂತರ ತಹಶೀಲ್ದಾರ್ ಮತ್ತು ಪಿಡಿಓ ರವರು ನಾನು ರಸ್ತೆಯ ಜಾಗವನ್ನು ಒತ್ತುವರಿ ಮಾಡಿಕೊಂಡಿರುವ ಕಾರಣ ಅದನ್ನು ತೆರವುಗೊಳಿಸುವಂತೆ ನೋಟೀಸನ್ನು ನನಗೆ ನೀಡಿದ್ದರು ಎಂದರೆ ಸರಿಯಲ್ಲ. ನಾನು ರಸ್ತೆಯ ಜಾಗವನ್ನು ಕಬಳಿಸುವ ಸಲುವಾಗಿ ಪ್ರತಿವಾದಿಗಳ ವಿರುದ್ದ ಸುಳ್ಳು ಪ್ರಕರಣ ಸಲ್ಲಿಸಿದ್ದೇನೆ ಎಂದರೆ ಸರಿಯಲ್ಲ. ಪ್ರತಿವಾದಿಗಳು ನನ್ನ ವಿರುದ್ದ ರಸ್ತೆ ಒತ್ತುವರಿ ಮಾಡಿರುತ್ತೇನೆ ಎಂದು ಹೇಳಿ ಲೋಕಾಯುಕ್ತರಿಗೆ ದೂರು ಸಲ್ಲಿಸಿದ್ದು ಅದರ ಮೇರೆಗೆ ನನಗೆ ನೋಟೀಸ್ ಬಂದಿರುತ್ತದೆ ಎಂದರೆ ಸರಿಯಲ್ಲ. ನಾನೇ ರಸ್ತೆಯ ಜಾಗವನ್ನು ಒತ್ತುವರಿ ಮಾಡಿಕೊಂಡು ಪ್ರತಿವಾದಿಗಳಿಗೆ ತೊಂದರೆ ಕೊಡಲು ಈ ಸುಳ್ಳು ಪ್ರಕರಣ ದಾಖಲಿಸಿದ್ದೇನೆ ಎಂದರೆ ಸರಿಯಲ್ಲ. ರಸ್ತೆಯು ಸರ್ಕಾರಿ ಜಾಗ ಆಗಿರುವ ಕಾರಣ ಅದರ ಮೇಲೆ ನನಗೆ ಯಾವುದೇ ವೈಯಕ್ತಿಕ ಹಿತಾಸಕ್ತಿ ಇರುವುದಿಲ್ಲ ಆದರೂ ಸಹ ಅದನ್ನು ಲಪಟಾಯಿಸಲು ಈ ಸುಳ್ಳು ಪ್ರಕರಣ ದಾಖಲಿಸಿ, ಸುಳ್ಳು ಪ್ರಮಾಣ ಪತ್ರ ಸಲ್ಲಿಸಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆ ಃ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಗಣಕೀಕರಣ ಮಾಡಲಾಯಿತು).

ಓ. ಹೆ. ಕೇ. ಸರಿ ಇದೆ.

**ಪ್ರಧಾನ ದಿವಾಣಿ ಹಾಗೂ ಪ್ರ.ದ.ನ್ಯಾ. ದಂ.ಗಳ**
**ನ್ಯಾಯಾಲಯ, ಚನ್ನಪಟ್ಟಣ.**